**ಸಿ.ಸಿಃ 2357/2022**

**ಚಾ.ಸಾಃ 05**

**ಪ್ರಾ.ಸಾಃ 03**

# ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಬಸವನ-ಬಾಗೇವಾಡಿ

**ಸಾಕ್ಷಿಗೆ ದಿನಾಂಕ 24.10.2025 ರಂದು ಪ್ರಮಾಣ ವಚನ ಬೋಧಿಸಲಾಯಿತು.**

ಹೆಸರು ಃ ಭೀಮರಾಯ ಕೊಟ್ಟರಗಸ್ತಿ

ತಂದೆಯ ಹೆಸರು ಃ ಸಾಹೇಬಣ್ಣ

ವಯಸ್ಸು ಃ **56** ವರ್ಷ

ಉದ್ಯೋಗ ಃ ವ್ಯವಸಾಯ

ವಾಸಸ್ಥಳ ಃ ಯಳವಾರ

**ಮುಖ್ಯ ವಿಚಾರಣೆ ಸರ್ಕಾರಿ ಅಭಿಯೋಜಕರವರಿಂದಃ**

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಯಿತು. ಅದು ಸ್ಥಳ ಕೃತ್ಯ ಮಹಜರಾಗಿದ್ದು, ಸಾಕ್ಷಿ ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಅದನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿರುತ್ತದೆ, ಅದರಲ್ಲಿರುವ ಸಾಕ್ಷಿ ಸಹಿ ಹೆಬ್ಬಟ್ಟಿನ ಗುರುತಾಗಿರುವ ಕಾರಣ ಅದನ್ನು ನಿಶಾನೆಯಾಗಿ ಗುರುತಿಸಿರುವುದಿಲ್ಲ. ಅದರಲ್ಲಿ ಏನು ಬರೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ಮಹಜರ ಕ್ರಮ ಜರುಗಿಸಿರುವುದಿಲ್ಲ. ಸಾಕ್ಷಿಗೆ ಎರಡು ಫೋಟೋಗಳನ್ನು ತೋರಿಸಿದ್ದು, ಅವುಗಳನ್ನು ಈಗಾಗಲೇ ನಿಪಿ-5 ಮತ್ತು 6 ಎಂದು ಗುರುತಿಸಲಾಗಿದ್ದು, ಅವುಗಳನ್ನು ಯಾವ ಕಾರಣಕ್ಕಾಗಿ ತಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

**(ಮಾನ್ಯ ಸ.ಸ.ಅ ರವರು ಸಾಕ್ಷಿ ಪ್ರತಿಕೂಲವಾಗಿ ಸಾಕ್ಷಿ ನುಡಿದಿದ್ದಾರೆ ಹಾಗಾಗಿ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಘೋಷಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಕೋರಿದ್ದು, ಅನುಮತಿಸಲಾಯಿತು)**

ಸಿ.ಸಿಃ 2357/2022

ಚಾ.ಸಾಃ 05

ಪ್ರಾ.ಸಾಃ 03

**ಪಾಟೀ ಸವಾಲು ಮಾನ್ಯ ಸ.ಸ.ಅ.ರವರಿಂದ**

2. ದಿಃ **08.11.2021** ರಂದು ಪೊಲೀಸರು ಅಪಘಾತದ ಸ್ಥಳದಲ್ಲಿ ಮಹಜರು ಕ್ರಮ ಜರುಗಿಸುವಾಗ ನಿಪಿ-**4** ಕ್ಕೆ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಿಪಿ-**5** ಮತ್ತು **6** ರಂತೆ ಫೋಟೋಗಳನ್ನು ತಗೆಯಲಾಗಿತ್ತು ಎಂದರೆ ಸರಿಯಲ್ಲ. ಎಲ್ಲಾ ವಿಷಯ ಗೊತ್ತಿದ್ದರು ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಏನೂ ಇಲ್ಲ ಅಂತಾ ಹೇಳಿರುತ್ತಾರೆ.**

**ಮರುವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸರಿ ಅದೆ.**

**(ಶ್ರೀ. ಅಮೀತ್ ಘಟ್ಟಿ )**

**ದಿವಾಣಿ ನ್ಯಾಯಾಧೀಶರು ಮತ್ತು**

**ನ್ಯಾಯಿಕ ದಂಡಾಧಿಕಾರಿಗಳು**

**ಬಸವನ ಬಾಗೇವಾಡಿ.**